ಇ) ಕ್ಷೇತ್ರವಾರು ಅನುದಾನ ಬಿಡುಗಡೆ ಮಾಡುವುದಿಲ್ಲ ಜಿಲ್ಲಾವಾರು ಅನುದಾನ ಬಿಡುಗಡೆ ಮಾಡಲಾಗಿದೆ ಪ್ರಕೃತಿ ವಿಕೋಪ ಪರಿಹಾರಕ್ಕೆ ಸರ್ಕಾರದಿಂದ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಿದೆ

2005–06 (ರೂ ಲಕ್ಷಗಳಲ್ಲಿ)

ಜಿಲ್ಲೆ	ಪ್ರವಾಹ/ ಮಳೆಹಾನಿ ಪರಿಹಾರ	ಉದ್ಯೋಗ ಸೃಜನೆ	ಕುಡಿಯುವ ನೀರು	ಬೆಳೆ ಪರಿಹಾರ	ಒಟ್ಟು
ದಕ್ಷಿಣ ಕನ್ನಡ	750–20	–	25–00	–	775 20
ಉತ್ತರ ಕನ್ನಡ	1019 00	20 00	74 00	–	1113 00
ಉಡುಪಿ	1083 10	–	–	–	1083 10

2006–07 (ರೂ ಲಕ್ಷಗಳಲ್ಲಿ)

ಜಿಲ್ಲೆ	ಪ್ರವಾಹ/ ಮಳೆಹಾನಿ ಪರಿಹಾರ	ಉದ್ಯೋಗ ಸೃಜನೆ	ಕುಡಿಯುವ ನೀರು	ಬೆಳೆ ಪರಿಹಾರ	ಒಟ್ಟು
ದಕ್ಷಿಣ ಕನ್ನಡ	550 00	–	10 00	–	560 00
ಉತ್ತರ ಕನ್ನಡ	750 0	–	30 00	44 38	824 38
ಉಡುಪಿ	400 00	–	10 00	–	410 00

13 (55) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ) ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ರಾಜ್ಯ ಹಣಕಾಸು ಸಂಸ್ಥೆಯ ಅಧಿಕಾರಿಗಳು ತಮ್ಮ ಬಂಧು–ಬಳಗ ಮತ್ತು ಪತ್ನಿಯ ಹೆಸರಿನಲ್ಲಿ ಖಾಸಗಿ ಹಣಕಾಸು ಸಂಸ್ಥೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ಮತ್ತು ಈವರೆಗೂ ಸರ್ಕಾರವು ಕೈಗೊಂಡ ಕ್ರಮಗಳೇನು ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು)

ಅ) – ಇಲ್ಲ –

ಆ) – ಉದ್ಭವಿಸುವುದಿಲ್ಲ –

15 (65) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವ ಕಲ್ಯಾಣ) ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಕಳೆದ 2 ವರ್ಷಗಳಿಂದ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ವಸತಿ ಮತ್ತು ವಾಣಿಜ್ಯ ಸಂಕೀರ್ಣಗಳಿಗೆ / ಮಲ್ಟಿಪ್ಲೆಕ್ಸ್ ಗಳಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮತಿ ಪತ್ರವನ್ನು ತೆಗೆದುಕೊಂಡಿರುವ ಸಂಸ್ಥೆಗಳ ಸಂಖ್ಯೆ ಎಷ್ಟು , (ಹೆಸರು ಮತ್ತು ಇತರೆ ವಿವರಗಳನ್ನು ಒದಗಿಸುವುದು) ,

ಆ) ಮೇಲ್ಕಂಡ ಅವಧಿಯಲ್ಲಿ ಅನುಮತಿ ಪತ್ರವನ್ನು ಪಡೆಯದೇ ಇರುವ ಸಂಸ್ಥೆಗಳು ಯಾವುವು ,

ಇ) ಕೆಲವು ವಸತಿ ಸಂಕೀರ್ಣ ಸಂಸ್ಥೆಗಳು ಅನೇಕ ನಿಯಮಗಳನ್ನು ಉಲ್ಲಂಘನೆ ಮಾಡಿರುವುದರಿಂದ ಮಂಡಳಿಯು ಅನುಮತಿಯನ್ನು ನಿರಾಕರಿಸಿದ್ದರೂ ಸಹ ಕಾಮಗಾರಿಯನ್ನು ಮುಂದುವರೆಸಿರುವುದು ನಿಜವೇ ,

ಈ) ಹಾಗಿದ್ದಲ್ಲಿ, ಇಂತಹ ಸಂಸ್ಥೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು, (ನಿಯಮಗಳನ್ನು ಉಲ್ಲಂಘನೆ ಮಾಡಿರುವ ಸಂಸ್ಥೆಗಳ ವಿವರಗಳನ್ನು ಒದಗಿಸುವುದು) ,

ಉ) ಅನುಮತಿ ಪಡೆಯದೇ ಇರುವ ಸಂಸ್ಥೆಗಳ ಮೇಲೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು ?

ಶ್ರೀ ಸಿ ಚನ್ನಿಗಪ್ಪ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಕಳೆದ 2 ವರ್ಷಗಳಿಂದ (ದಿನಾಂಕ 22 1 2007 ರವರೆಗೆ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ EIA ಅಧಿಸೂಚನೆಗೆ ಒಳಪಡುವ 115 ವಸತಿ ಮತ್ತು ವಾಣಿಜ್ಯ ಸಂಕೀರ್ಣಗಳಿಗೆ / ಮಲ್ಟಿಪ್ಲೆಕ್ಸ್ ಗಳಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಜಲ (ನಿಯಂತ್ರಣ ಮತ್ತು ನಿವಾರಣೆ) ಕಾಯ್ದೆ 1974 ಮತ್ತು ವಾಯು (ನಿಯಂತ್ರಣ ಮತ್ತು ನಿವಾರಣೆ) ಕಾಯ್ದೆ 1981ರ ಅಡಿಯಲ್ಲಿ ಸ್ಥಾಪನಾ ಸಮ್ಮತಿ ಪತ್ರವನ್ನು ನೀಡಿರುತ್ತದೆ ಪಟ್ಟಿಯನ್ನು ಅನುಬಂಧ–1 ರಲ್ಲಿ ಲಗತ್ತಿಸಿದೆ